ಓ ಎಸ್ ನಂಃ 31/2015

ಪಿ. ಡಬ್ಲ್ಯೂ ಃ 1

ದಿಃ 28.11.2022 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.

ಮುಖ್ಯ ವಿಚಾರಣೆಃ ವಾದಿ ಪರ ಶ್ರೀ ಹೆಚ್ ಎನ್ ಎಸ್ ವಕೀಲರಿಂದ

ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರಿಕೆ ಸಲ್ಲಿಸಿರುತ್ತೇನೆ. ಅದರಲ್ಲಿರುವ ಎಲ್ಲಾ ವಿಚಾರಗಳು ಸತ್ಯವಾಗಿರುತ್ತದೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ. ಸದರಿ ಪ್ರಮಾಣ ಪತ್ರಿಕೆಯನ್ನು ನನ್ನ ಮುಖ್ಯ ವಿಚಾರಣೆ ಎಂದು ತೆಗೆದುಕೊಳ್ಳಬೇಕು ಎಂದು ಕೋರುತ್ತೇನೆ.

ನಮ್ಮ ಕುಟುಂಬದ ವಂಶವೃಕ್ಷವಿರುವ ಪ್ರಮಾಣಪತ್ರವನ್ನು ಕೊಟ್ಟಿದ್ದು ಅದನ್ನು ನಿ ಪಿ 1 ಎಂದು, ದಾವಾ ಸ್ವತ್ತಿಗೆ ಸಂಬಂಧಿಸಿದ 4 ಆರ್ ಟಿ ಸಿ ಗಳನ್ನು ಕೊಟ್ಟಿದ್ದು ಅವುಗಳನ್ನು ನಿ ಪಿ 2 ರಿಂದ ನಿ ಪಿ 5 ಎಂದು, ದಿನಾಂಕ ಃ 24.09.2004 ರ ಕ್ರಯಪತ್ರದ ದೃಢೀಕೃತ ಪ್ರತಿಯನ್ನು ಕೊಟ್ಟಿದ್ದು ಅದನ್ನು ನಿ ಪಿ 6 ಎಂದು, ದಿನಾಂಕ ಃ 2.03.2006 ರ ಕ್ರಯಪತ್ರದ ದೃಢೀಕೃತ ಪ್ರತಿಯನ್ನು ಕೊಟ್ಟಿದ್ದು ಅದನ್ನು ನಿ ಪಿ 7 ಎಂದು, ದಿನಾಂಕಃ 28.05.2012 ರ ದಾನಪತ್ರದ ದೃಢೀಕೃತ ಪ್ರತಿಯನ್ನು ಕೊಟ್ಟಿದ್ದು ಅದನ್ನು ನಿ ಪಿ 8 ಎಂದು, ದಿನಾಂಕ ಃ 8.06.2011 ರ ಕ್ರಯಪತ್ರದ ದೃಢೀಕೃತ ಪ್ರತಿಯನ್ನು ಕೊಟ್ಟಿದ್ದು ಅದನ್ನು ನಿ ಪಿ 9 ಎಂದು, ದಾವಾ ಸ್ವತ್ತುಗಳಿಗೆ ಸಂಬಂಧಿಸಿದ ಪ್ರಸಕ್ತ ವರ್ಷದ 2 ಆರ್ ಟಿ ಸಿ ಗಳನ್ನು ಕೊಟ್ಟಿದ್ದು ಅವುಗಳನ್ನು ನಿ ಪಿ 10 ಮತ್ತು ನಿ ಪಿ 11 ಎಂದು ಗುರುತಿಸಲಾಯಿತು. ದಾವೆಯಲ್ಲಿ ಕೋರಿರುವಂತೆ ದಾವೆಯನ್ನು ಡಿಕ್ರಿ ಮಾಡಿಕೊಡಬೇಕೆಂದು ಕೋರಿಕೊಳ್ಳುತ್ತೇನೆ.

ಪಾಟೀ ಸವಾಲಿಗಾಗಿ ಕಾಲಾವಕಾಶ ಕೋರಿದ್ದು, ಕೋರಿಕೆಯ ಮೇರೆಗೆ ಮುಂದೂಡಲಾಯಿತು.

(ಉಕ್ತ ಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಓ

ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರು,

ಮಾಗಡಿ.